# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು-32

ಸಂಖ್ಯೆ: ಸ.ಅ/ವಾ-21/ಪಿ.ಆರ್/11/2020-21 ದಿನಾಂಕ:16-03-2021

::ವಾರ್ಡ್ ಸಮಿತಿ ಸಭೆಯ ನಡವಳಿಗಳು::

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 06-03-2021 ರಂದು ವಾರ್ಡ್ ನಂ:21 ಹೆಬ್ಬಾಳದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

:: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಂ.ವೆಂಕಟಾಚಲಪತಿ (ಜಂಟಿ ಆಯುಕ್ತರು ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಮುಕೇಶ್.ಎಸ್.ಬಿರಾದಾರ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 21 |
| 3. | ಶ್ರೀ. ನಟರಾಜ್. | ಕಂದಾಯ ನಿರೀಕ್ಷಕರು. |
| 4. | ಶ್ರೀ ರಾಮಣ್ಣ | ತೆರಿಗೆ ನಿರೀಕ್ಷಕರು. |
| 5. | ಶ್ರೀಮತಿ ರಾಧಾ | ಕಿರಿಯ ಅಭಿಯಂತರರು (ಬೆಸ್ಕಾಂ). |
| 6. | ಶ್ರೀ. ಲಝುರ್ | ವಾಟರ್‌ಮ್ಯಾನ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ). |
| 7. | ಶ್ರೀ. ಆನಂದ್.ಪಿ.ಸಿ | ಕಿರಿಯ ಅಭಿಯಂತರರು (ಬೀದಿ ದೀಪ ವಿಭಾಗ). |
| 8. | ಶ್ರೀ .ಸೋಮಶೇಖರ್ | ಕಿರಿಯ ಆರೋಗ್ಯ ಪರಿವೀಕ್ಷಕರು. |
| 9. | ಶ್ರೀ. ಕ್ಯಾಪ್ಟನ್ ರಾಮಚಂದ್ರ | ಅಧ್ಯಕ್ಷರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ |
| 10. | ಶ್ರೀ. ವೀರ ಶೇಖರ್ | ಕಾರ್ಯದರ್ಶಿ, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 11. | ಶ್ರೀ.ಗೋಪಿನಾಥ್ ರಾವ್ | ಸ್ಥಳೀಯ ನಿವಾಸಿಗಳು |
| 12. | ಶ್ರೀ. ಎನ್. ಶ್ರೀನಿವಾಸ ರಾವ್ | ಉಪಾದ್ಯಕ್ಷರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 13. | ಶ್ರೀಮತಿ. ಸ್ವಪ್ನ ಗೌಡರ್ | ಸ್ಥಳೀಯ ನಿವಾಸಿಗಳು |
| 14. | ಶ್ರೀಮತಿ ಅಂಬಿಕಾ | ಸ್ಥಳೀಯ ನಿವಾಸಿಗಳು |
| 15. | ಶ್ರೀ. ಚಂದ್ರ | ಸ್ಥಳೀಯ ನಿವಾಸಿಗಳು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವೆಂಕಟಾಚಲಪತಿ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದಾರ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 19-02-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.
- <u>ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:</u>
  1. ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ರವರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು
  2. ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನಗಳಿಗೆ ಮೈಕ್ ಅಳವಡಿಸಿ ಕಸ ವಿಲೇವಾರಿ ಬಗ್ಗೆ ಪ್ರಚಾರ ಮಾಡುವಂತೆ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸುವಂತೆ ಸೂಚಿಸಲಾಯಿತು.

- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಗೆ:**
  1. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರ ಲಸಿಕೆಯನ್ನು ವಾರ್ಡಿನ ಸಾರ್ವಜನಿಕರು ಹಾಗೂ ಅಧಿಕಾರಿ ನೌಕರರುಗಳಗೆ ತೆಗೆದುಕೊಳ್ಳಲು ಅಗತ್ಯ ಕ್ರಮವಹಿಸುವಂತೆ ಹಾಗೂ ಸರಿಯಾದ ರೀತಿಯಲ್ಲಿ ಉಪಯೋಗವಾಗುತ್ತಿದೆಯೇ? ಎಂದು ಪರಿಶೀಲಿಸುವಂತೆ ಸೂಚಿಸಿದೆ.

- **ವಿದ್ಯುತ್ ವಿಭಾಗದವರಿಗೆ:**
  1. ವಾರ್ಡ್ ವ್ಯಾಪ್ತಿಯ ಆನಂದ ನಗರ ಆಟದ ಮೈದಾನ ಹಾಗೂ ಇತರೆ ಸ್ಥಳಗಳಲ್ಲಿ ಬೀದಿ ದೀಪಗಳು ದುರಸ್ಥಿಯಲ್ಲಿರುವುದರಿಂದ ಸ್ಥಳೀಯ ನಿವಾಸಿಗಳು ರಾತ್ರಿ ವೇಳೆಯಲ್ಲಿ ಸಂಚರಿಸಲು ಹಾಗೂ ಇತರೆ ಕಳ್ಳತನ ಮುಂತಾದ ಅನಾಹುತಗಳು ಆಗುತ್ತಿದೆ ಎಂದು ದೂರು ಸಲ್ಲಿಸಿರುತ್ತಾರೆ. ಆದ್ದರಿಂದ ಸಂಬಂಧಪಟ್ಟ ವಿದ್ಯುತ್ ವಿಭಾಗದ ಅಧಿಕಾರಿಗಳು ಈ ಕೂಡಲೇ ದುರಸ್ಥಿಗೊಂಡಿರುವ ಬೀದಿ ದೀಪಗಳನ್ನು ಸರಿಪಡಿಸಿ ಅಗತ್ಯ ಸ್ಥಳಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಸೂಚಿಸಿದೆ.

- **ಕಾಮಗಾರಿ ಇಲಾಖೆಗೆ.**
  1. ವಾರ್ಡ್ ವ್ಯಾಪ್ತಿಯಲ್ಲಿ ಉಳಿದಿರುವ ರಸ್ತೆ ಗುಂಡಿಗಳನ್ನು ಕೂಡಲೇ ಸರಿಪಡಿಸುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

- **ಕಂದಾಯ ಇಲಾಖೆ:**
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಆದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.

- ತೋಟಗಾರಿಕೆ ಇಲಾಖೆ
  1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಚಾಚಿಕೊಂಡಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ಇವರ ಅವಗಾಹನೆಗಾಗಿ ಸಲ್ಲಿಸಿದೆ
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ಇವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ಇವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ಇವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ಇವರ ಅವಗಾಹನೆಗಾಗಿ ಕಳುಹಿಸಿದೆ
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ಇವರ ಅವಗಾಹನೆಗಾಗಿ ಕಳುಹಿಸಿದೆ
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ಇವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ಇವರ ಅವಗಾಹನೆಗಾಗಿ ಕಳುಹಿಸಿದೆ
09. ಕಛೇರಿ ಕಡತಕ್ಕೆ.